# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಬಿ.ಎಲ್.ಡಿ.ಇ. ಕಾಲೇಜ್ ಆಫ್ ಫಾರ್ಮಸಿ, ಬಿಜಾಪುರ ಇಲ್ಲಿಗೆ ಎಂ.ಫಾರ್ಮ ಕೋರ್ಸ್ ಪ್ರಾರಂಭಿಸಲು ಅನುಮತಿ ಕುರಿತು.

**ಓದಲಾಗಿದೆ:**

ರಿಜಿಸ್ಟ್ರಾರ್, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಬೆಂಗಳೂರು ಇವರ ಪತ್ರ ಸಂಖ್ಯೆ: ಎಸಿಎ/ಪಿಹೆಚ್-26/2010-11, ದಿನಾಂಕ: 22-6-2009.

**ಪ್ರಸ್ತಾವನೆ:**

ಮೇಲೆ ಓದಲಾದ ಪತ್ರದಲ್ಲಿ ರಿಜಿಸ್ಟ್ರಾರ್, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಬೆಂಗಳೂರು ಇವರು ಬಿ.ಎಲ್.ಡಿ.ಇ. ಕಾಲೇಜ್ ಆಫ್ ಫಾರ್ಮಸಿ, ಬಿಜಾಪುರ ಇಲ್ಲಿ ಎಂ. ಫಾರ್ಮ (ಫಾರ್ಮಸಿ ಪ್ರಾಕ್ಟೀಸ್) ಕೋರ್ಸ್‌ನ್ನು 2010-11ನೇ ಸಾಲಿನಿಂದ ತಲಾ 06 ಸೀಟುಗಳ ಪ್ರವೇಶ ಮಿತಿಯೊಂದಿಗೆ ಹೊಸದಾಗಿ ಪ್ರಾರಂಭಿಸಲು ಶಿಫಾರಸ್ಸು ಮಾಡಿ ಶೈಕ್ಷಣಿಕ ಪರಿಷತ್ ಹಾಗೂ ಸಿಂಡಿಕೇಟ್ ತೆಗೆದುಕೊಂಡ ನಿರ್ಣಯದ ಪ್ರತಿಗಳನ್ನು ಮುಂದಿನ ಕ್ರಮಕ್ಕಾಗಿ ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಸರ್ಕಾರವು ಪರಿಶೀಲಿಸಿದೆ. ಅದರಂತೆ ಈ ಕೆಳಕಂಡಂತೆ ಆದೇಶ.

***ಸರ್ಕಾರದ ಆದೇಶ ಸಂಖ್ಯೆ: ಆಕುಕ 287 ಪಿಟಿಡಿ 2009 ಬೆಂಗಳೂರು, ದಿನಾಂಕ: 03-03-2010.***

1994 ರ ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಅಧಿನಿಯಮದ 45(5)ನೇ ಪ್ರಕರಣದಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಬಿ.ಎಲ್.ಡಿ.ಇ. ಕಾಲೇಜ್ ಆಫ್ ಫಾರ್ಮಸಿ, ಬಿಜಾಪುರ ಇಲ್ಲಿ ಎಂ. ಫಾರ್ಮ (ಫಾರ್ಮಸಿ ಪ್ರಾಕ್ಟೀಸ್) ಕೋರ್ಸ್‌ನ್ನು 2010-11ನೇ ಸಾಲಿನಿಂದ ತಲಾ 06 (ಆರು) ಸೀಟುಗಳ ಪ್ರವೇಶ ಮಿತಿಯೊಂದಿಗೆ ಹೊಸದಾಗಿ ಪ್ರಾರಂಭಿಸಲು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಸರ್ಕಾರದ ಅನುಮತಿ ನೀಡಲಾಗಿದೆ.

1) ಸಂಯೋಜನೆಯ ಬಗ್ಗೆ ಅಖಿಲ ಭಾರತ ತಾಂತ್ರಿಕ ಶಿಕ್ಷಣ ಪರಿಷತ್ತಿನ ಅನುಮತಿ ಪಡೆಯತಕ್ಕದ್ದು.
2) ಸಂಯೋಜನೆಯ ಬಗ್ಗೆ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಅನುಮತಿ ಪಡೆಯತಕ್ಕದ್ದು.
3) ಸರ್ಕಾರದ ಸೀಟುಗಳ ಹಂಚಿಕೆಯಲ್ಲಿ, ಪ್ರವೇಶಾವಕಾಶಕ್ಕೆ ಖಾಲಿ ಜಾಗಗಳಲ್ಲಿಗಾಗಿ ನಿಯಮಗಳಿಗೆ ಸಂಸ್ಥೆಯು ಬದ್ಧವಾಗಿರಬೇಕು.
4) ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ / ಫಾರ್ಮಸಿಕೌನ್ಸಿಲ್ ಆಫ್ ಇಂಡಿಯಾ ನಿಗಧಿಪಡಿಸಿರುವ ಪರಿನಿಯಮಾವಳಿಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.
5) ರಾಜ್ಯ ಸರ್ಕಾರವು ಕಾಲ-ಕಾಲಕ್ಕೆ ನೀಡುವ ಸೂಚನೆ ಹಾಗೂ ಆದೇಶಗಳನ್ನು ಪಾಲಿಸತಕ್ಕದ್ದು.

2

Dr. NAVANATH. V. KALYANE
PRINCIPAL
M.Pharm., Ph.D.
6/3/10

B.L.D.E. Association's
College of Pharmacy
Bijapur
Inward No. 279
Date 6-3-10

6) ಈ ಕಾಲೇಜುಗಳಿಗೆ ಕರ್ನಾಟಕ ಸರ್ಕಾರದ ವತಿಯಿಂದ ಯಾವುದೇ ರೀತಿಯ ಅನುದಾನ, ಆರ್ಥಿಕ ಸೌಲಭ್ಯಗಳನ್ನು ನೀಡಲಾಗುವುದಿಲ್ಲ. ಇದು ಶಾಶ್ವತ ಅನುದಾನ ರಹಿತ ಷರತ್ತಿಗೆ ಒಳಪಟ್ಟಿರುತ್ತದೆ.

7) ಪ್ರಸ್ತಾಪಿತ ಸೀಟುಗಳಲ್ಲಿ ಶೇಕಡಾ 50 ರಷ್ಟು ಸೀಟುಗಳನ್ನು ಸರ್ಕಾರಿ ಸೀಟುಗಳಾಗಿ ಬಿಟ್ಟು ಕೊಡತಕ್ಕದ್ದು.

8) ಸರ್ಕಾರದ ಮೇಲ್ಕಂಡ ಯಾವುದೇ ಒಂದು ಷರತ್ತನ್ನು ಉಲ್ಲಂಘಿಸಿದ್ದಲ್ಲಿ ಸಂಯೋಜನೆ / ಮಂಜೂರಾತಿಯನ್ನು ಹಿಂತೆಗೆದುಕೊಳ್ಳಲಾಗುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎನ್. ಮಹಾಲಕ್ಷ್ಮಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
(ಭಾರತೀಯ ವೈದ್ಯ ಪದ್ಧತಿ)

**ಇವರಿಗೆ:**

1) ಕುಲಸಚಿವರು, ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, 4 ನೇ 'ಟಿ' ಬ್ಲಾಕ್, ಜಯನಗರ, ಬೆಂಗಳೂರು-41.
2) ನಿರ್ದೇಶಕರು, ವೈದ್ಯಕೀಯ ಶಿಕ್ಷಣ, ಆನಂದರಾವ್ ವೃತ್ತ, ಬೆಂಗಳೂರು-560 009.
3) ಪ್ರಾಂಶುಪಾಲರು, ಬಿ.ಎಲ್.ಡಿ.ಇ. ಕಾಲೇಜ್ ಆಫ್ ಫಾರ್ಮಸಿ, ಬಿಜಾಪುರ
4) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು-1.
5) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ವೈದ್ಯಕೀಯ ಶಿಕ್ಷಣ), ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಆಪ್ತ ಕಾರ್ಯದರ್ಶಿಯವರಿಗೆ.
6) ಸರ್ಕಾರದ ಅಪರ ಕಾರ್ಯದರ್ಶಿ (ವೈದ್ಯಕೀಯ ಶಿಕ್ಷಣ), ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಆಪ್ತ ಸಹಾಯಕರಿಗೆ.
7) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.